# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190,

# ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರವರ ತಿದ್ದುಪಡಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020-21 ದಿ: 02.10.2020ರ ಆದೇಶದಂತೆ ದಿನಾಂಕ: 17.10.2020 ರಂದು ಮಧ್ಯಾಹ್ನ 3.00 ಘಂಟೆಗೆ ವಾರ್ಡ್ ಸಂಖ್ಯೆ 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ನೋಡಲ್ ಅಧಿಕಾರಿ ರವರ ಅಧ್ಯಕ್ಷೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಬೆಯಲ್ಲಿ ಹಾಜರಿದ್ದ ಸದಸ್ಯರು/ಅಧಿಕಾರಿಗಳು.**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಟಿ. ಹನುಮಂತರಾಯ | ಅಧ್ಯಕರು/ ನೋಡಲ್ ಅಧಿಕಾರಿಗಳು |
| 2 | ಶ್ರೀ ರವಿ ಡಿ | ಸಂಚಾಲಕರು/ ಕಾರ್ಯದರ್ಶಿಗಳು |
| 3 | ಶ್ರೀಮತಿ ಲಕ್ಷ್ಮೀ ಬಿ | ಸಹ ಕಂದಾಯ ಅಧಿಕಾರಿ |
| 4 | ಶ್ರೀ ಸಾಯಬಣ್ಣ | ಸಹಾಯಕ ಅಭಿಯಂತರರು, ಬಿ.ಡಬ್ಲೂ.ಎಸ್.ಎಸ್.ಬಿ. |
| 5 | ಶ್ರೀ ಡಿ. ವಿಜಯಕುಮಾರ್ | ಕಿರಿಯ ಅಭಿಯಂತರರು, ಬೇಸ್ಕಾಂ |
| 6 | ಶ್ರೀ ಟಿ.ಜಿ. ರಾಜು | ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ ಶ್ರೀನಿವಾಸ ರೆಡ್ಡಿ | ಸದಸ್ಯರು |
| 8 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 9 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |
| 10 | ಶ್ರೀ ಉಮೇಶ್ ಎಸ್. | ಸದಸ್ಯರು |
| 11 | ಶ್ರೀ ಶಂಕರ ಎನ್ | ಸದಸ್ಯರು |

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ ಟಿ ಹನುಮಂತರಾಯ ಮತ್ತು ಕಾರ್ಯದರ್ಶಿಗಳಾದ ಶ್ರೀ ಡಿ. ರವಿ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು, ಅಧ್ಯಕ್ಷರು ವಾರ್ಡ್ ಸಭೆಗೆ ಹಾಜರಾಗಿದ್ದ ಸದಸ್ಯರಿಗೆ ಮತ್ತು ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಪ್ರಸ್ತಾಪಿಸಲು ಕೋರಿದ್ದರು.

ಹಿಂದಿನ ಸಭಾ ನಡುವಾಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಿ ಇಂಜಿಯರಿಂಗ್, ಘನತ್ಯಾಜ್ಯ ನಿರ್ವಹಣೆ ಮತ್ತು ಕೋವಿಡ್-19 ತಂಡಗಳು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಸುಧಾರಣೆ ತಂದಿರುವುದನ್ನು ಗಮನಿಸಿದ್ದು, ಇನ್ನು ಉತ್ತಮ ರೀತಿಯಲ್ಲಿ ಮುಂದುವರೆಸಲು ನೋಡಲ್ ಅಧಿಕಾರಿ ರವರು ತಿಳಿಸಿದರು.

1. **ಬಿ.ಬಿ.ಎಂ.ಪಿ (ವಿದ್ಯುತ್)**

   ಬೀದಿ ದೀಪಗಳು:- ಹಿಂದಿನ ಸಭೆಯಲ್ಲಿ ಸ್ಥಳ ಪರಿವೀಕ್ಷಣೆ ಮಾಡಿ ನಾಗರೀಕರ ಸಮಸ್ಯೆಗಳನ್ನು ಪರಿಹರಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದ್ದು, ಈ ಬಗ್ಗೆ ಸಂಬಂಧಪಟ್ಟ ಅಭಿಯಂತರರಿಗೆ ವಾರ್ಡ್ ಸಮಿತಿಗೆ ಆಹ್ವಾನೆ ನೀಡಿದ್ದರೂ ಸಭೆಗೆ ಹಾಜರಾಗಿರುವುದಿಲ್ಲ,

Scanned with Car

2. **ಆರೋಗ್ಯ ಇಲಾಖೆ :**

ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಕ್ರಮಕೈಗೊಂಡಿರುವ ವರದಿ ನೀಡಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಗಿತ್ತು. ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ಹಿಂದಿನ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು, ಹಾಜರಾಗಿದ್ದು, ಸದರಿಯವರು ಇಂದಿನ ಸಭೆಗೆ ಗೈರುಹಾಜರಾಗಿದ್ದು, ಸದರಿ ವಿಷಯದ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರ ಜೊತೆ ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳಲುವುದಾಗಿ ಉತ್ತರಿಸಿರುತ್ತಾರೆ. ಹಾಗೂ ಮಂಸದ ಅಂಗಡಿಗಳ ವಿವರಗಳನ್ನು ನಿರ್ದೇಶಕರು ಪಶುಪಾಲನೆ ರವರಿಂದ ಮಾಹಿತಿಯನ್ನು ಪಡೆದುಕೊಳ್ಳಲು ತಿಳಿಸಿರುತ್ತಾರೆ. ಕೋವಿಡ್-19 ಸಾಂಕ್ರಾಮಿಕ ರೋಗ ತಡೆಗಟ್ಟುವಿಕೆ ಬಗ್ಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಲು ಸೂಚಿಲಾಗಿತ್ತು. ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ಉತ್ತರಿಸಿರುತ್ತಾರೆ.

3. **ಬಿ.ಡಬ್ಲೂ.ಎಸ್.ಎಸ್.ಬಿ :**

ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಕ್ರಮಕೈಗೊಂಡಿರುವ ವರದಿ ನೀಡಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಗಿತ್ತು, ಈ ಬಗ್ಗೆ ಕಾಮಗಾರಿ ನಡೆಯುವ ಸ್ಥಳದಲ್ಲಿ ಎಚ್ಚರಿಕೆ ಸೂಚನಾ ಫಲಕವನ್ನು ರಸ್ತೆಯ ಮಧ್ಯ ಭಾಗದ ಪ್ರಗತ್ತಿಯಲ್ಲಿರುವ ಕಾಮಗಾರಿಗಳಿಗೆ ಅಳವಡಿಸಲಾಗುತ್ತಿದೆ. ಹೊಸಪಾಳ್ಯ ಮುಖ್ಯ ರಸ್ತೆಯ ಉಜ್ವಲ್ ಫ್ಯಾಕ್ಟರಿ ಹತ್ತಿರ ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕಾಮಗಾರಿಯನ್ನು ಪೂರ್ಣಗೊಳಿಸಿದ್ದು, ರಸ್ತೆಯನ್ನು ಯಥಾಸ್ಥಿಗೆ ತರಲು ತೆಗೆದು ಕೊಂಡ ಕ್ರಮದ ಬಗ್ಗೆ ಕೇಳಿದಾಗ ರಸ್ತೆ ಅಗೆದಿರುವ ಸ್ಥಳದಲ್ಲಿ ವೆಟ್‌ಮಿಕ್ಸ್ ಹಾಕಿ ಯಾಥಾಸ್ಥಿತಿಗೆ ತರಲಾಗಿದೆ, ಮಂಗಮ್ಮಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿ ಮಾರ್ಗ ಕಾಮಗಾರಿಯನ್ನು ಕೈಗೊಳ್ಳಲು ವಾರ್ಡ್ ಸಭೆಯಲ್ಲಿ ಅಧ್ಯಕ್ಷರು ಸೂಚಿಸಿರುತ್ತಾರೆ. ಈ ಬಗ್ಗೆ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ಉತ್ತರಿಸಿರುತ್ತಾರೆ.

4. **ಕಂದಾಯ ವಿಭಾಗ :**

ಹಿಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ "ಬಿ" ಖಾತಾಗಳ ಹೆಚ್ಚಾಗಿದ್ದು, ಇದರ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ವಿವರಿಸಲು ಸೂಚಿಸಲಾಗಿತ್ತು. ಈ ಬಗ್ಗೆ ಕಂದಾಯ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ಸಂಬಂಧಪಟ್ಟ ಕಂದಾಯ ಪರಿವೀಕ್ಷಕರಿಗೆ ಸೂಚಿಸಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಪ್ರತ್ಯೇಕವಾಗಿ ಕಂದಾಯ ಪರಿವೀಕ್ಷಕರು ಪರಿಶೀಲಿಸುತ್ತಿದ್ದಾರೆ ಎಂದು ಉತ್ತರಿಸಿರುತ್ತಾರೆ.

5. **ಕಾಮಗಾರಿ ವಿಭಾಗ :**

ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ತೆಗೆದುಕೊಂಡಿರುವ ಕ್ರಮದ ಕುರಿತು ಹಾಗೂ ಇಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಚರಂಡಿಗಳಲ್ಲಿ ತುಂಬಿ ಕೊಂಡಿರುವ ಹೂಳೆತ್ತಲು ಕ್ರಮ ವಹಿಸಲು ಅಧ್ಯಕ್ಷರು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಿರುತ್ತಾರೆ. ಸಹಾಯಕ ಅಭಿಯಂತರರು,

Scanned with Car

2020-21ನೇ ಸಾಲಿನ ಕ್ರಿಯಾಯೋಜನೆ ಅಡಿಯಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಟೆಂಡರ್ ಕರೆದು, ಕಾರ್ಯದೇಶ ನೀಡಿದ್ದ ನಂತರ ಕಾಮಗಾರಿ ಪೂರ್ಣಗೊಳಿಸಲಾಗುದು ಹಾಗೂ ವಾರ್ಡ್ ವ್ಯಾಪ್ತಿಯ ಚರಂಡಿಗಳಲ್ಲಿ ತುಂಬಿಕೊಂಡಿರುವ ಹೂಳೇತ್ತಲು ಕ್ರಮ ವಹಿಸಲಾಗುವುದು ಎಂದು ಈ ಬಗ್ಗೆ ಉತ್ತಿರಿಸಿರುತ್ತಾರೆ.

6. **ಬೇಸ್ಕಂ ಇಲಾಖೆ :**

ವಾರ್ಡ್ ವ್ಯಾಪ್ತಿಯ ಮಂಗಮ್ಮನಪಾಳ್ಯ ಮುಖ್ಯ ರಸ್ತೆ ಉಜ್ವಲ್ ಫ್ಯಾಕ್ಟರಿ ಹತ್ತಿರ ಇರುವ ಹಳೆಯ ಕಂಬಗಳನ್ನು ತೆರವುಗೊಳಿಸಲು ಅಧ್ಯಕ್ಷಕರು ಸೂಚಿಸಿರುತ್ತಾರೆ. ಈ ಬಗ್ಗೆ ಬೇಸ್ಕಂ ಸಹಾಯಕ ಅಭಿಯಂತರರು ಕ್ರಮ ವಹಿಸಲಾಗುವುದು ಎಂದು ಉತ್ತಿರಿಸಿರುತ್ತಾರೆ.

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ~~ನೋಡಲ್ ಅಧಿಕಾರಿಗಳು~~
ವಾರ್ಡ್ ನಂ. 190

ಪ್ರತಿಯನ್ನು:-

1. ವಿಶೇಷ್ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು(ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
3. ವಾರ್ಡ್ ಸಮಿತಿಯ ಅಧ್ಯಕ್ಷಕರ ಮಾಹಿತಿಗಾಗಿ ಸಲ್ಲಿಸಿದೆ.
4. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ.

Scanned with Car